(ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು''

1994ರ ಕರ್ನಾಟಕ ಧನ ವಿನಿಯೋಗ (ನಂ.3) ನಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೆನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ''1994ರ ಕರ್ನಾಟಕ ಧನ ವಿನಿಯೋಗ 9ನಂ.3 ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಮಂಡಿಸಲು ಅನುಮತಿ ನೀಡಲಾಯಿತು

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇವೆ.

ಅನುಬಂಧ I

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿದೇಯಕ ಪರ್ಯಾವಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ಧನ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ''1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2 ಮತ್ತು 3

ಅಧ್ಯಕ್ಷರು : ''ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸ್ಪಟ್ಟಿತು